ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಶುಕ್ರವಾರ, ದಿನಾಂಕ : 29 ನೇ ಜನವರಿ, 2021

ಬಸ್ ಚಾಲನೆ ವೇಳೆ ಚಾಲಕರು ಮೊಬೈಲ್ ಫೋನ್ ಬಳಸುತ್ತಿರುವ ಬಗ್ಗೆ

ಶ್ರೀ ರಘುನಾಥ್‌ರಾವ್ ಮಲ್ಕಾಪೂರೆ(ವಿಧಾನಸಭೆಯಿಂದ ಚುನಾಯಿತರಾದವರು) -

30 (33) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಜುಲೈ-2020 ರಿಂದ ಡಿಸೆಂಬರ್ ಅಂತ್ಯದವರೆಗೆ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯಲ್ಲಿ ಚಾಲಕರು ಬಸ್ ಚಾಲನೆ ವೇಳೆ ತಮ್ಮ ಮೊಬೈಲ್ ಫೋನ್ ಬಳಕೆ ಮಾಡಿ ಕರ್ತವ್ಯ ಲೋಪ ಎಸಗಿರುವ ಎಷ್ಟು ಪ್ರಕರಣಗಳನ್ನು ಪತ್ತೆಹಚ್ಚಲಾಗಿದೆ;(ಡಿಪೋವಾರು ಚಾಲಕರ ಹೆಸರು ಸಹಿತ ವಿವರ ನೀಡುವುದು)

(ಆ) ಈ ರೀತಿಯ ಕರ್ತವ್ಯ ಲೋಪ ಎಸಗಿರುವ ಚಾಲಕರ ವಿರುದ್ಧ ಸಂಸ್ಥೆ ಯಾವ ನಿಯಮದಡಿ ಏನು ಕ್ರಮ ಕೈಗೊಳ್ಳಲಿದೆ;

(ಇ) ಬಸ್‌ನಲ್ಲಿ ಪ್ರಯಾಣಿಸುವ ಪ್ರಯಾಣಿಕರ ಜವಾಬ್ದಾರಿ ಚಾಲಕರ ಮೇಲಿದ್ದು, ಚಾಲಕರು ಈ ರೀತಿ ಮೊಬೈಲ್ ಫೋನ್ ಬಳಕೆ ಮಾಡಿ ಪ್ರಯಾಣಿಕರ ಜೀವನದ ಜೊತೆ ಚೆಲ್ಲಾಟ ಆಡುವ ಈ ಉದ್ದಟತನವನ್ನು ಕೊನೆಗಾಣಿಸುವ ಅಗತ್ಯವಿದ್ದು, ಸರ್ಕಾರ ಕೈಗೊಳ್ಳುವ ಕ್ರಮಗಳಾವುವು;

(ಈ) ಮೇಲ್ಕಂಡ ಅವಧಿಯಲ್ಲಿ ಪತ್ತೆಹಚ್ಚಲಾದ ಪ್ರಕರಣಗಳಲ್ಲಿ ಎಷ್ಟು ಜನ ಚಾಲಕರ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ; (ಡಿಪೋವಾರು ಚಾಲಕರ ಹೆಸರು ಸಹಿತ ವಿವರ ನೀಡುವುದು) ಕ್ರಮ ಕೈಗೊಳ್ಳದೇ ಇದ್ದಲ್ಲಿ ಕಾರಣಗಳೇನು; ಎಷ್ಟು ಸಮಯದಲ್ಲಿ ಅಂತಹ ಚಾಲಕರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು;

(ಉ) ಚಾಲಕರ ವಿರುದ್ಧ ಕ್ರಮ ಕೈಗೊಳ್ಳುವಲ್ಲಿ ಹಿರಿಯ ಅಧಿಕಾರಿಗಳು ವಿಳಂಬ ಧೋರಣೆ ಅನುಸರಿಸುತ್ತಿರುವುದು ಅಥವಾ ಚಾಲಕರ ಜೊತೆ ಶಾಮೀಲಾಗಿ ಕ್ರಮ ಕೈಗೊಳ್ಳ ದೇ ಇರುವ ಸಾಧ್ಯತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅಂತಹ ಅಧಿಕಾರಿಗಳ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ?